**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 89/2020**

**ಚಾ.ಸಾಃ 23, ಪ್ರಾ.ಸಾಃ 12**

| | |
|---|---|
| ಸಾಕ್ಷಿದಾರನ ಹೆಸರು | ಶ್ರೀಮತಿ ಸಾವಿತ್ರಿ ನಾಯ್ಕ |
| ಗಂಡನ ಹೆಸರು | ಆನಂದು ನಾಯ್ಕ |
| ವಯಸ್ಸು | 52 ವರ್ಷಗಳು |
| ಉದ್ಯೋಗ | ಆರಕ್ಷಕ ಉಪ-ನಿರೀಕ್ಷಕರು, ಕುಮಟಾ ಪೋಲೀಸ್ ಠಾಣೆ |
| ವಾಸ್ತವ್ಯ | ಕುಮಟಾ |

**ಸಾಕ್ಷಿಯನ್ನು ದಿನಾಂಕಃ 18-07-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ಅಗಸ್ಟ-2018 ರಿಂದ ಜನವರಿ-2022 ರ ವರೆಗೆ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಆರಕ್ಷಕ ಉಪ-ನಿರೀಕ್ಷಕಳಾಗಿ ಕೆಲಸ ಮಾಡಿರುತ್ತೇನೆ.

ದಿನಾಂಕಃ 01-01-2020 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಮಧ್ಯಾಹ್ನ 02-30 ಕ್ಕೆ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ನಂ.1/2020 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದೂರನ್ನು ನೋಡುತ್ತಿದ್ದು ಅದನ್ನು ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-28 ಎಂದು, ಸಾಕ್ಷಿ ಸಹಿಯನ್ನು ನಿಪಿ-28(ಎ) ಎಂದು ಗುರುತಿಸಲಾಯಿತು.

ಅದೇ ದಿನ ಮಧ್ಯಾಹ್ನ 03-45 ರಿಂದ 4.45 ರ ಸಮಯದಲ್ಲಿ ಘಟನಾ ಸ್ಥಳಕ್ಕೆ ಭೇಟಿ ನೀಡಿ ಚಾ.ಸಾ. 1 ರವರು ತೋರಿಸಿದ ಸ್ಥಳದಲ್ಲಿ ಪಂಚರ ಸಮಕ್ಷಮ ಸ್ಥಳ ಪಂಚನಾಮೆಯನ್ನು ತಯಾರಿಸಿ ಸ್ಥಳದಲ್ಲಿ 3 ಭಾವಚಿತ್ರವನ್ನು ತೆಗೆಸಿ, ಸ್ಥಳದ ಕಚ್ಚಾ ನಕಾಶೆಯನ್ನು ತಯಾರಿಸಿರುತ್ತೇನೆ. ಸ್ಥಳ ಪಂಚನಾಮೆಯನ್ನು ನೋಡುತ್ತಿದ್ದು ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಸ್ಥಳದ ಕಚ್ಚಾ ನಕಾಶೆಯನ್ನು ನೋಡುತ್ತಿದ್ದು ನಿಪಿ-3 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಲಾಯಿತು. ಆ ಕಾಲಕ್ಕೆ ತೆಗೆದ ಫೋಟೋವನ್ನು ನೋಡುತ್ತಿದ್ದು ನಿಪಿ-4 ರಿಂದ 6 ಎಂದು ಗುರುತಿಸಲಾಗಿದೆ. ಅದೇ ದಿನ ಚಾ.ಸಾ. 8 ಮತ್ತು 9 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ನಂತರ ಕೇಸಿನ ಕಡತವನ್ನು ಚಾ.ಸಾ. 24 ರವರಿಗೆ ವಹಿಸಿರುತ್ತೇನೆ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ವಿ.ಎಂ.ಬಿ.ರಿಂದಃ</u>**

ದೂರನ್ನು ಫಿರ್ಯಾದಿಯವರೇ ತಯಾರು ಮಾಡಿಕೊಂಡು ಬಂದಿದ್ದರು. ಹೂವಿನಹಿತ್ಲು ಹೊನ್ನಾವರದಿಂದ 17 ಕಿ.ಮೀ. ದೂರದಲ್ಲಿದೆ ಎಂದರೆ ಸರಿ. ನಾನು ಘಟನಾ ಸ್ಥಳಕ್ಕೆ ಅರೇಂಗಡಿ ಮೂಲಕ ಹೋಗಿರುತ್ತೇನೆ. ಫಿರ್ಯಾದುದಾರರು ಮೊದಲೇ ಅವರ ಮನೆಗೆ ಹೋಗಿದ್ದರು. ಫಿರ್ಯಾದಿಯ ಮನೆ ತೋಟದಲ್ಲಿದೆ ಎಂದರೆ ಸರಿ. ವಾಹನವನ್ನು ಫಿರ್ಯಾದಿಯ ಮನೆಯಿಂದ ಸುಮಾರು ಅರ್ಧ ಫರ್ಲಾಂಗ್ ದೂರ ನಿಲ್ಲಿಸಿ ನಡೆದುಕೊಂಡು ಹೋಗಿರುತ್ತೇವೆ. ನಾನು ಸ್ಥಳಕ್ಕೆ ಹೋದಾಗ ಪಂಚರಿಗೆ ಫೋನ್ ಮಾಡಿ ಸ್ಥಳಕ್ಕೆ ಬರಮಾಡಿಕೊಂಡಿರುತ್ತೇನೆ. ಪಂಚರು ಮೊದಲೇ ಪರಿಚಯ ಇರಲಿಲ್ಲ. ಸ್ಥಳಕ್ಕೆ ಹೋದ ನಂತರ ಪಂಚರ ವಿವರವನ್ನು ಪಡೆದುಕೊಂಡಿರುತ್ತೇನೆ. ಫಿರ್ಯಾದಿಯ ಮನೆಯ ಹತ್ತಿರ ಅದೇ ದಿನ ಹೋಗಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪಂಚನಾಮೆಯನ್ನು ಮತ್ತು ಕಚ್ಚಾ ನಕಾಶೆಯನ್ನು ಠಾಣೆಯಲ್ಲಿ ತಯಾರಿಸಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ ಇರುವುದಿಲ್ಲ.</u>**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**